# Bangalore
# Regional News
# 04.07.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಈರುಳ್ಳಿ ಖರೀದಿ ಬೆಲೆಯನ್ನು ಕ್ವಿಂಟಾಲ್‌ಗೆ ೧ ಸಾವಿರದ ೮೭೫ ರಿಂದ ೨ ಸಾವಿರದ ೧೨೫ ರೂಪಾಯಿಗೆ ಹೆಚ್ಚಿಸಿ ಕೇಂದ್ರ ಸರ್ಕಾರ ಆದೇಶ
2. ಪ್ರಕೃತಿ ವಿಕೋಪ ಮತ್ತು ಜನರ ಸಮಸ್ಯೆಗೆ ಕೂಡಲೇ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸಚಿವ ಯು.ಟಿ.ಖಾದರ್ ಸೂಚನೆ
3. ಕೆಆರ್‌ಎಸ್ ಅಣೆಕಟ್ಟೆನಿಂದ ನಾಲೆಗಳಿಗೆ ತಕ್ಷಣವೇ ನೀರು ಹರಿಸುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರಕ್ಕೆ ಆಗ್ರಹ
4. ಬೆಂಗಳೂರಿನಲ್ಲಿಂದು ಗಗನಯಾತ್ರಿ ಶುಭಾಂಶು ಶುಕ್ಲಾ ಅವರ 'ದ ಸೆಕೆಂಡ್ ಆರ್ಬಿಟ್' ಪುಸ್ತಕ ಬಿಡುಗಡೆ

<><><><>

ಕೇಂದ್ರ ಸರ್ಕಾರ ಈರುಳ್ಳಿ ಖರೀದಿ ಬೆಲೆಯನ್ನು ಕ್ವಿಂಟಾಲ್‌ಗೆ ಶೇಕಡ ೧೩ರಷ್ಟು ಹೆಚ್ಚಿಸಿ, ಇಂದಿನಿಂದ ಜಾರಿಗೆ ಬರುವಂತೆ ಘೋಷಿಸಿದೆ. ಪ್ರತಿ ಕ್ವಿಂಟಾಲ್ ಈರುಳ್ಳಿ ಖರೀದಿ ಬೆಲೆಯನ್ನು ಕ್ವಿಂಟಾಲ್‌ಗೆ ೧ ಸಾವಿರದ ೮೭೫ ರಿಂದ ೨ ಸಾವಿರದ ೧೨೫ಕ್ಕೆ ಏರಿಸಿದೆ. ಸರ್ಕಾರದ ಬೆಲೆ ಸ್ಥಿರೀಕರಣ ಬಫರ್‌ಗಾಗಿ ನಫೇಡ್ ಮತ್ತು ಎನ್‌ಸಿಸಿಎಫ್ ಮೂಲಕ ಈರುಳ್ಳಿ ಖರೀದಿ ಪ್ರಗತಿಯಲ್ಲಿದೆ ಎಂದು ಗ್ರಾಹಕ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಪರಿಷ್ಕೃತ ಖರೀದಿ ಬೆಲೆಯು ರೈತರಿಗೆ ಉತ್ತಮ ಆದಾಯವನ್ನು ಖಚಿತಪಡಿಸಲಿದೆ. ರಾಜ್ಯದ ಚಿತ್ರದುರ್ಗ ಮತ್ತು ಚಳ್ಳಕೆರೆ ಪ್ರದೇಶದಲ್ಲಿ ಬಿತ್ತನೆ ಪ್ರಗತಿಯು ಸಾಮಾನ್ಯದ ಸುಮಾರು ೬೦ ಪ್ರತಿಶತದಷ್ಟಿದೆ ಎಂದು ಕೇಂದ್ರ ಸರ್ಕಾರ ಅಂದಾಜಿಸಿದೆ. ಕೇಂದ್ರ ಸರ್ಕಾರದ ಈ ಆದೇಶದಿಂದ ರಾಜ್ಯ ಈರುಳ್ಳಿ ಬೆಳೆಗಾರರಿಗೆ ಕೊಂಚ ನೆಮ್ಮದಿ ನೀಡಿದೆ.

<><><><>

ಪ್ರಕೃತಿ ವಿಕೋಪ ಮತ್ತು ಸಂತ್ರಸ್ತರ ಸಮಸ್ಯೆಗೆ ಕೂಡಲೇ ಸ್ಪಂದಿಸುವಂತೆ ಅಧಿಕಾರಿಗಳಿಗೆ ಆರೋಗ್ಯ ಸಚಿವ ಹಾಗೂ ಜಿಲ್ಲಾ ಪ್ರಾಕೃತಿಕ ವಿಕೋಪ ಮೇಲುಸ್ತುವಾರಿ ಸಚಿವ ಯು.ಟಿ.ಖಾದರ್ ಸೂಚಿಸಿದ್ದಾರೆ. ಕಾರವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರಕೃತಿ ವಿಕೋಪದ ಪೂರ್ವತಯಾರಿ, ಹಾಗೂ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರಕೃತಿ ವಿಕೋಪ ನಿರ್ವಹಣೆಗೆ ಸಂಬಂಧಿಸಿದಂತೆ ಪರಿಹಾರ ವಿತರಣೆಗೆ ಯಾವುದೇ ಹಣಕಾಸಿನ

ಸಮಸ್ಯೆ ಇಲ್ಲಾ ಎಂದು ಸ್ಪಷ್ಟಪಡಿಸಿದ್ದಾರೆ. ಮಳೆಯಿಂದ ಹಾನಿಯಾದ ಕುಟುಂಬಕ್ಕೆ ತಕ್ಷಣ ಐದು ಸಾವಿರ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಂತ್ರಸ್ತರಿಗೆ ಪಂಚಾಯಿತಿ ಅಧಿಕಾರಿಗಳು ವಿಳಂಬ ಮಾಡಿದರೆ, ಅವರ ವಿರುದ್ಧ ಶಿಸ್ತು ಕ್ರಮಕೈಗೊಳ್ಳಿ ಎಂದು ಜಿಲ್ಲಾಧಿಕಾರಿಗೆ ಸೂಚಿಸಿದ್ದಾರೆ.

<><><>

ರಾಜ್ಯ ಸರ್ಕಾರ ರೈತ ವಿರೋಧಿ ಧೋರಣೆಯನ್ನು ಅನುಸರಿಸುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ನೀರಾವರಿ ನೀರಿನ ಕೊರತೆಯಿಂದ ಕೆಆರ್‌ಎಸ್ ಅಚ್ಚುಕಟ್ಟು ಪ್ರದೇಶದಲ್ಲಿ ಕಬ್ಬು ಸೇರಿದಂತೆ ಸಾವಿರಾರು ಎಕರೆ ಬೆಳೆಗಳು ಒಣಗುತ್ತಿವೆ ಎಂದು ದೂರಿದ್ದಾರೆ. ತಕ್ಷಣವೇ ಕೆಆರ್‌ಎಸ್‌ನಿಂದ ನಾಲೆಗಳಿಗೆ ನೀರು ಹರಿಸಿ ಬೆಳೆಗಳನ್ನು ಉಳಿಸಿ ಎಂದು ಆಗ್ರಹಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ನಷ್ಟ ಅನುಭವಿಸಿದ ಪ್ರತಿಯೊಬ್ಬ ರೈತರಿಗೂ ಪ್ರತಿ ಎಕರೆಗೆ ೫೦ ಸಾವಿರ ಪರಿಹಾರ ನೀಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><><>

ಭಾರತದ ನವೋದ್ಯಮ ಪರಿಸರ ವ್ಯವಸ್ಥೆಯು ಅತ್ಯಂತ ವೇಗವಾಗಿ ವಿಕಸನಗೊಳ್ಳುತ್ತಿದ್ದು, ಡೀಪ್‌ಟೆಕ್ ಆಧಾರಿತ ಮತ್ತು ಹಾರ್ಡ್‌ವೇರ್ ನಾವೀನ್ಯತೆಗಳತ್ತ ಹೆಚ್ಚು ಗಮನ ಹರಿಸುತ್ತಿದೆ ಎಂದು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ದೇಶದ ನಾವೀನ್ಯತೆಯ ಭೂದೃಶ್ಯದಲ್ಲಿ ಆಗುತ್ತಿರುವ ವ್ಯಾಪಕ ಬದಲಾವಣೆಯಲ್ಲಿ ಬೆಂಗಳೂರು ಮುಂಚೂಣಿಯಲ್ಲಿದೆ ಎಂದು ಹೇಳಿದ್ದಾರೆ. ಕಳೆದ ವರ್ಷ ಕೇವಲ ೭ ರಷ್ಟಿದ್ದ ಈ ಸಂಖ್ಯೆ, ಈ ವರ್ಷ ೨೧ ಯುವ ಉದ್ಯಮಿಗಳೊಂದಿಗೆ ಬೆಂಗಳೂರು ಯು-೩೦ ಪಟ್ಟಿಯಲ್ಲಿ ಮುಂಚೂಣಿಯಲ್ಲಿದೆ. ಯು-೩೦ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಕಂಪನಿಗಳ ಪೈಕಿ ೧೮ ಕಂಪನಿಗಳು ಬೆಂಗಳೂರಿನಲ್ಲಿ ಪ್ರಧಾನ ಕಚೇರಿಯನ್ನು ಹೊಂದಿದ್ದು, ಇದು ದೇಶದ ಯಾವುದೇ ನಗರಕ್ಕಿಂತ ಅತ್ಯಧಿಕವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಭಾರತೀಯ ಸ್ಟಾರ್ಟ್‌ಅಪ್‌ಗಳ ಮುಂದಿನ ಅಲೆಯು ಡೀಪ್‌ಟೆಕ್ ಮತ್ತು ಹಾರ್ಡ್‌ಟೆಕ್ ಮೇಲೆ ಹೆಚ್ಚು ಗಮನ ಕೇಂದ್ರೀಕರಿಸುತ್ತಿದ್ದು, ಕೃತಕಬುದ್ಧಿಮತ್ತೆ, ಸ್ಪೇಸ್‌ಟೆಕ್, ಸೈಬರ್ ಸೆಕ್ಯೂರಿಟಿ ಮತ್ತು ಸುಧಾರಿತ ಉತ್ಪಾದನಾಕ್ಷೇತ್ರಗಳಲ್ಲಿ ಬಲವಾದ ವೇಗವನ್ನು ಪಡೆದುಕೊಳ್ಳುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಮುಂಬರುವ ದಿನಗಳಲ್ಲಿ ನಮ್ಮದೇ ಬಾಹ್ಯಾಕಾಶ ನೌಕೆ, ಭಾರತದ ಮಣ್ಣಿನಿಂದಲೇ ಮಿಷನ್ ಗಗನಯಾನ ಆರಂಭವಾಗಲಿದೆ ಎಂದು ಗಗನಯಾತ್ರಿ ಶುಭಾಂಶು ಶುಕ್ಲ ತಿಳಿಸಿದ್ದಾರೆ. ಬೆಂಗಳೂರಿನ ನೆಹರು ತಾರಾಲಯದಲ್ಲಿ ಇಂದು ತಮ್ಮ 'ದ ಸೆಕೆಂಡ್ ಆರ್ಬಿಟ್' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ವ್ಯಕ್ತಿಯ ಸಾಧನೆ ತರಗತಿಯ ಕೋಣೆಯಿಂದಲೇ ಆರಂಭವಾಗುವುದು ಎಂದು ಹೇಳಿದ್ದಾರೆ. ತಮ್ಮ ಈ ಸಾಧನೆಗೆ ಕಾರಣವಾದ ಇಸ್ರೋ ಹಾಗೂ

ಭಾರತೀಯ ವಾಯುಪಡೆಗೆ ಅವರು ಧನ್ಯವಾದ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ತಾವು ಪ್ರೇಕ್ಷಕರ ಸಾಲಿನಲ್ಲಿ ಕುಳಿತು ಬಾಹ್ಯಾಕಾಶದ ಅನುಭವವನ್ನು ಕೇಳುವಂತಾಗಲಿ ಎಂದು ತಿಳಿಸಿದ್ದಾರೆ. ಈ ಪುಸ್ತಕ ಕೇವಲ ಬಾಹ್ಯಾಕಾಶ ಮಿಷನ್‌ಗೆ ಮಾತ್ರ ಸೀಮಿತವಾಗಿಲ್ಲ, ಇದು ತರಗತಿಯ ಕೋಣೆಯಿಂದ ಬಾಹ್ಯಾಕಾಶ ಹೊರಗಿನ ಪ್ರಯಾಣದ ಬಗ್ಗೆ ಮಾತನಾಡುವ ಪುಸ್ತಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಶುಭಾಂಶು ಶುಕ್ಲ (೩೩ ಸೆಕೆಂಡ್‌ಗಳು)

ಇದೇ ವೇಳೆ ಅಂತರಿಕ್ಷದ ಬಗ್ಗೆ ತಮ್ಮ ಅನುಭವವನ್ನು ಹಂಚಿಕೊಂಡ ಗಗನಯಾತ್ರಿ ಪ್ರಶಾಂತ್ ಬಿ. ನಾಯರ್, ಇಂದಿನ ಮಕ್ಕಳು ಕೃತಕಬುದ್ಧಿಮತ್ತೆಯಿಂದ ತಾಯಿ ಮಾಡುವ ಅಡುಗೆಯ ರುಚಿಯನ್ನು ಪಡೆದುಕೊಳ್ಳಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು. ಶುಭಾಂಶು ಶುಕ್ಲ ಅವರು ಈ ಪುಸ್ತಕದಲ್ಲಿ ಇಡೀ ಭೂಮಿಯನ್ನು ಪ್ರತಿನಿಧಿಸಿರುವ ಬಗ್ಗೆ ಉಲ್ಲೇಖಿಸಿದ್ದಾರೆ. ಇಡೀ ಭೂಮಿ ಇಂದು ಸೂರ್ಯನ ಸುತ್ತ ೩೧ ಕಿಲೋಮೀಟರ್ ವೇಗದಲ್ಲಿ ಚಲಿಸುತ್ತಿದ್ದು, ವಾಸ್ತವವಾಗಿ ನಾವೆಲ್ಲರೂ ಈಗಾಗಲೇ ಗಗನಯಾತ್ರಿಗಳೇ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಪ್ರಶಾಂತ್ ಬಿ. ನಾಯರ್ (೨೮ ಸೆಕೆಂಡ್‌ಗಳು)

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಕೀರ್ತಿಚಕ್ರ ಪ್ರಶಸ್ತಿ ಪುರಸ್ಕೃತರಾದ ರವೀಶ್ ಮಲ್ಹೋತ್ರಾ, ಪ್ರೊ. ಕೆ. ವಿಜಯ್ ರಾಘವನ್, ಇಸ್ರೋ ಮಾಜಿ ಅಧ್ಯಕ್ಷರಾದ ಎ.ಎಸ್. ಕಿರಣ್‌ಕುಮಾರ್, ಡಾ. ಎಸ್. ಸೋಮನಾಥನ್ ಹಾಗೂ ಏರ್ ಮಾರ್ಷಲ್ ಎಸ್. ಶ್ರೀನಿವಾಸ್ ಹಾಗೂ ಜವಾಹರಲಾಲ್ ನೆಹರು ತಾರಾಲಯದ ನಿರ್ದೇಶಕ ಡಾ. ಬಿ.ಆರ್. ಗುರುಪ್ರಸಾದ್ ಉಪಸ್ಥಿತರಿದ್ದರು.

<><><><>

ರಾಜ್ಯದೆಲ್ಲೆಡೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಮುಂದುವರೆದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಈಗಾಗಲೇ ಶೇಕಡ ೯೧.೯ ಮತದಾರರ ಮ್ಯಾಪಿಂಗ್ ಕಾರ್ಯ ಮುಗಿದಿದೆ. ಮತದಾರರ ಪಟ್ಟಿಯಲ್ಲಿ ೯ ಲಕ್ಷದ ೧೨ ಸಾವಿರದ ೯೧೩ ಮತದಾರರಿದ್ದು, ಈ ಪೈಕಿ ೬ ಲಕ್ಷದ ೨೧ ಸಾವಿರದ ೧೯೩ ಅಂದರೆ ಶೇಕಡ ೬೮.೦೫ ರಷ್ಟು ಗಣತಿ ನಮೂನೆಯನ್ನು ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಮಂಡ್ಯದಲ್ಲಿ ನಡೆಯುತ್ತಿರುವ ಎಸ್.ಐ.ಆರ್ ಪ್ರಕ್ರಿಯೆಯನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ಹಾಗೂ ಜಿಲ್ಲಾಧಿಕಾರಿ ಡಾ. ಕುಮಾರ ವಿವಿಧೆಡೆ ಭೇಟಿ ನೀಡಿ ಪರಿಶೀಲಿಸಿದರು. ಮಂಡ್ಯ ನಗರದ ವಿದ್ಯಾನಗರ, ಗಾಂಧಿನಗರ ವಿವಿಧ ವಾರ್ಡ್‌ಗಳಿಗೆ ಹಾಗೂ ಮಂಡ್ಯ ತಾಲ್ಲೂಕಿನ ಹನಕೆರೆಗೆ ಭೇಟಿ ನೀಡಿದ ಅವರು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣಾ ಪ್ರಕ್ರಿಯೆ ಕಾರ್ಯವನ್ನು ಖುದ್ದು ವೀಕ್ಷಿಸಿದರು. ಮನೆಮನೆಗೆ ಭೇಟಿ ನೀಡಿ ಮಾಹಿತಿ ಕಲೆಹಾಕುವಂತೆ ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ

ಬಿಎಲ್‌ಒಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಚುನಾವಣಾ ಆಯೋಗದ ಆದೇಶದಂತೆ ಪ್ರತಿ ಮನೆಗೂ ತೆರಳಿ ನಿಗದಿತ ಗಣತಿ ನಮೂನೆಗಳನ್ನು ವಿತರಿಸಿ, ಸಂಬಂಧಪಟ್ಟವರಿಂದ ಸಹಿ ಪಡೆಯುವುದು ಕಡ್ಡಾಯವಾಗಿದೆ ಎಂದು ತಿಳಿಸಿದ್ದಾರೆ. ದಾವಣಗೆರೆಯಲ್ಲಿಯೂ ಮತಗಟ್ಟೆ ಅಧಿಕಾರಿಗಳು ಕಡ್ಡಾಯವಾಗಿ ಮತದಾರರ ಮನೆ ಮನೆಗೆ ಭೇಟಿ ನೀಡಬೇಕು ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್ ಸೂಚನೆ ನೀಡಿದ್ದಾರೆ.

<><><><>

ನೀರು ಕುಡಿಯಲು ಬಂದ ಕಾಡೆಮ್ಮೆಯೊಂದು ಕೆಸರಿನಲ್ಲಿ ಸಿಲುಕಿ ಮೃತಪಟ್ಟ ಘಟನೆ ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಉಡುತೊರೆ ಹಳ್ಳ ಜಲಾಶಯ ಬಳಿ ನಡೆದಿದೆ. ಮಲೆ ಮಹದೇಶ್ವರ ವನ್ಯಜೀವಿಧಾಮ ವ್ಯಾಪ್ತಿಯ ಉಡುತೊರೆ ಹಳ್ಳ ಜಲಾಶಯದಲ್ಲಿ ಗುರುವಾರ ಸಂಜೆ ನೀರು ಕುಡಿಯಲು ಬಂದ ಕಾಡೆಮ್ಮೆ ಕೆಸರಿಗೆ ಸಿಲುಕಿಕೊಂಡು ಇಡೀ ರಾತ್ರಿ ಒಂದೇ ಜಾಗದಲ್ಲಿ ಒದ್ದಾಡಿ ನಿತ್ರಾಣಗೊಂಡಿತ್ತು. ನಿನ್ನೆ ದನಗಾಹಿಗಳು ಕಾಡೆಮ್ಮೆ ಕೆಸರಿಗೆ ಸಿಲುಕಿಕೊಂಡಿರುವದನ್ನು ನೋಡಿ ಅರಣ್ಯ ಇಲಾಖೆಯ ಸಿಬ್ಬಂದಿಗೆ ಮಾಹಿತಿ ನೀಡಿದ್ದರು. ಬಳಿಕ, ಅರಣ್ಯ ಇಲಾಖೆ ಸಿಬ್ಬಂದಿ ಆರೈಕೆ ಮಾಡಿದರಾದರೂ ಚೇತರಿಕೆ ಕಾಣದೇ ಕಾಡೆಮ್ಮೆ ಮೃತಪಟ್ಟಿದೆ ಎಂದು ಮಲೆ ಮಹದೇಶ್ವರ ವನ್ಯಜೀವಿಧಾಮದ ಡಿಸಿಎಫ್ ಭಾಸ್ಕರ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>